ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

27

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 1|6|2

# ಮುಚ್ಚಿದ ಲಕೋಟೆಯಲ್ಲಿ ಸಮಿತಿ ವರದಿ

ನವದೆಹಲಿ: ಕೇಂದ್ರ ಸರ್ಕಾರದ ಮೂರು ವಿವಾದಿತ ಕೃಷಿ ಕಾಯ್ದೆಗಳ ಕುರಿತು ಅಧ್ಯಯನ ನಡೆಸಲೆಂದು ಸುಪ್ರೀಂಕೋರ್ಟ್‌ನಿಂದ ನೇಮಕಗೊಂಡಿದ್ದ ತಜ್ಞರ ಸಮಿತಿಯು ಮಾ.19ರಂದು ಮುಚ್ಚಿದ ಲಕೋಟೆಯಲ್ಲಿ ತನ್ನ ವರದಿ ಸಲ್ಲಿಸಿದೆ. ಈ ಕುರಿತು ಬುಧವಾರ ಸಮಿತಿಯ ಸದಸ್ಯರೊಬ್ಬರು ಮಾಹಿತಿ ನೀಡಿದ್ದಾರೆ. ಕೃಷಿ ಕಾಯ್ದೆ ರದ್ದು ಕೋರಿ ರೈತರು ಕಳೆದ 5 ತಿಂಗಳಿಂದಲೂ ಪ್ರತಿಭಟನೆ ನಡೆಸುತ್ತಿದ್ದಾರೆ. ಜ.11ರಂದು ಸುಪ್ರೀಂ ಕೋರ್ಟ್ ಈ ಕಾಯ್ದೆಗಳ ಅನುಷ್ಠಾನಕ್ಕೆ ತಡೆಯಾಜ್ಞೆ ತಂದು, ಬಿಕ್ಕಟ್ಟು ಇತ್ಯರ್ಥಕ್ಕೆ ನಾಲ್ವರು ಸದಸ್ಯರ ಸಮಿತಿಯನ್ನು ರಚಿಸಿತ್ತು. ಜತೆಗೆ, ಕಾಯ್ದೆಗೆ ಸಂಬಂಧಿಸಿದ ಎಲ್ಲರನ್ನೂ ಸಂಪರ್ಕಿಸಿ 2 ತಿಂಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿತ್ತು. ಆದರಂತೆ, ಮಾ.19ರಂದೇ ವರದಿ ಸಲ್ಲಿಸಲಾಗಿದ್ದು, ಮುಂದಿನ ನಿರ್ಧಾರವನ್ನು ನ್ಯಾಯಾಲಯವೇ ಕೈಗೊಳ್ಳಲಿದೆ ಎಂದು ಸಮಿತಿಯ ಸದಸ್ಯ ಪಿ.ಕೆ.ಮಿಶ್ರಾ ತಿಳಿಸಿದ್ದಾರೆ.